# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 08-04-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

ಹಾಜರಿದ್ದ ಸದಸ್ಯರು,

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ. ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ಶಾಹೀನಾ, ವೈದ್ಯಾಧಿಕಾರಿಗಳು, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀ ವಿನೋದ್, ಸ್ಥಳೀಯರು, ಕಾಚರಕನಹಳ್ಳಿ,
8. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

ಹಾಜರಿದ್ದ ಅಧಿಕಾರಿಗಳು

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಕುಮಾರಿ ರಜನಿ, ಇಂಜಿನಿಯರ್, ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀ ರವೀಂದ್ರ, ಅರಣ್ಯ ಇಲಾಖೆ,
8. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
9. ಶ್ರೀ ವೆಂಕಟೇಶ್, ತೋಟಗಾರಿಕೆ ಇಲಾಖೆ,
10. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಇತ್ತೀಚಗೆ ಮರಗಿಡಗಳು ಹೇರಳವಾಗಿ ಚಿಗುರಿದ್ದು, ಇದರಿಂದ ಬೀದಿ ಬದಿಯ ವಿದ್ಯುತ್ ದೀಪಗಳ ಬೆಳಕು ಸಮರ್ಪಕವಾಗಿ ಬೀಳುತ್ತಿರುವುದಿಲ್ಲ ಹಾಗೂ ಏನಾದರೂ ಅವಘಡಗಳು ನಡೆದಾಗ ಸಿಸಿ ಕ್ಯಾಮೆರಾಗಳಲ್ಲಿ ಸೆರೆಯಾಗುತ್ತಿರುವುದಿಲ್ಲ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ ಅರಣ್ಯ ವಿಭಾಗದ ಅಧಿಕಾರಿಗಳು ಉತ್ತರಿಸಿ, ವಾರ್ಡ್ ಪ್ರದೇಶದಲ್ಲಿ ಪರಿಶೀಲಿಸಿ, ಅವಶ್ಯವಿರುವ ಕಡೆ ಮರಗಳನ್ನು ಟ್ರಿಮ್ ಮಾಡುವುದಾಗಿ ಸಭೆಗೆ ತಿಳಿಸಿದರು.

2) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಹಾಲಿ ಇರುವ ಬೀದಿ ದೀಪಗಳು ಉರಿಯುತ್ತಿದ್ದು, ರಾಮಯ್ಯ ಬಡಾವಣೆಯ ಹಲವು ರಸ್ತೆಗಳಿಗೆ ಹೊಸ ದೀಪಗಳ ಫಿಟ್ಟಿಂಗ್ಸ್ ಅವಶ್ಯಕತೆ ಇರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ ಈ ಬಗ್ಗೆ ಚರ್ಚಿಸಿ, ಮುಂದಿನ ಸಭೆಗೆ ಬೀದಿ ದೀಪಗಳ ವಿಭಾಗದ ಅಧಿಕಾರಿಗಳನ್ನು ಕಡ್ಡಾಯವಾಗಿ ಆಹ್ವಾನಿಸುವುದಾಗಿ ಸಭೆಯಲ್ಲಿ ಹಾಜರಿದ್ದ ಅಭಿಯಂತರರು ಸಭೆಗೆ ತಿಳಿಸಿದರು.

3) **ಶ್ರೀ ವಿನೋದ್, ಸ್ಥಳೀಯರು, ಕಾಚರಕನಹಳ್ಳಿ,** ರವರು ಮಾತನಾಡಿ, ಕಾಚರಕನಹಳ್ಳಿ ಪ್ರದೇಶದಲ್ಲಿ ಗಾರ್ಬೇಜ್ ಆಟೋ ಟಿಪ್ಪರ್‌ಗಳು ಸಮಯಕ್ಕೆ ಸರಿಯಾಗಿ ಬರುತ್ತಿದ್ದು, ಯಾವುದೇ ಸಮಸ್ಯೆ ಇರುವುದಿಲ್ಲ. ಆದರೆ ರಸ್ತೆಯಲ್ಲಿ ರಸ್ತೆ ಗುಡಿಸುವಿಕೆಯನ್ನು ಇನ್ನಷ್ಟು ತೀವ್ರಗೊಳಿಸಲು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ನಿರೀಕ್ಷಕರು ಮಾತನಾಡಿ, ಪೌರ ಕಾರ್ಮಿಕರ ಕೊರತೆ ಇದ್ದು, ಕೂಡಲೇ ಬೇರೆ ಪೌರಕಾರ್ಮಿಕರನ್ನು ನಿಯೋಜಿಸಿ, ಕೂಡಲೇ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

4) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)** ರವರು ಮಾತನಾಡಿ, ರಾಮಯ್ಯ ಬಡಾವಣೆಯಲ್ಲಿರುವ ಸಮ್ ಓವೆರ್ ರೆಸ್ಟೋರಂಟ್ ಹತ್ತಿರ ಹೆಚ್ಚು ಜನಜಂಗುಳಿ ಇದ್ದು, ರಸ್ತೆಯಲ್ಲಿ ಯದ್ವಾ ತದ್ವಾ ವಾಹನಗಳನ್ನು ನಿಲ್ಲಿಸಿ, ಕಾಫಿ ತಿಂಡಿಯನ್ನು ರಸ್ತೆಯಲ್ಲೇ ಸೇವಿಸುತ್ತಾ, ಸಾರ್ವಜನಿಕರಿಗೆ ರಸ್ತೆಯಲ್ಲಿ ಓಡಾಡಲು ಮುಜುಗರವನ್ನು ಉಂಟು ಮಾಡುತ್ತಿರುತ್ತಾರೆ. ಈ ಬಗ್ಗೆ ಕಳೆದ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಭಾಗಶಃ ಕಡಿಮೆಯಾಗಿರುತ್ತದೆ. ಆದಾಗ್ಯೂ ಇನ್ನಷ್ಟು ಪೋಲೀಸರ ಗಸ್ತು ವಾಹನಗಳನ್ನು ತೀವ್ರಗೊಳಿಸಲು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ ಕಾನೂನು ಸುವ್ಯವಸ್ಥೆ ಪೋಲೀಸ್ ಅಧಿಕಾರಿಗಳು ಮಾತನಾಡಿ, ಕೂಡಲೇ ಗಸ್ತನ್ನು ತೀವ್ರಗೊಳಿಸಿ, ನಿಯಂತ್ರಿಸಲಾಗುವುದು ಎಂದು ತಿಳಿಸಿದರು.

5) **ಡಾ॥ ಶಾಹೀನಾ, ವೈದ್ಯಾಧಿಕಾರಿಗಳು, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ ರವರು** ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಯಾವುದೇ ಕೋವಿಡ್ ಪ್ರಕರಣಗಳು ದೃಢಪಟ್ಟಿರುವುದಿಲ್ಲ. ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಮುಂದುವರೆಸಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು ಹಾಗ್ಗೂ 14 ರಿಂದ 18 ವಯೋಮಾನದವರಿಗೆ ಶಾಲೆ ಹಾಗೂ ಆರೋಗ್ಯ ಕೇಂದ್ರಗಳಲ್ಲಿ ಕೋವಿಡ್ ಲಸಿಕೆ ಹಾಕಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು | Prasanna Kumar A<br>ಅಧ್ಯಕ್ಷರು |
| ಸಹಾಯಕ ಅಭಿಯಂತರರು | (ನೋಡೆಲ್ ಅಧಿಕಾರಿಗಳು) |
| ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ | ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ |

**ಪ್ರತಿಯನ್ನು**

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.